ಗೌರಿಬಿದನೂರು ಆಸ್ಪತ್ರೆಯನ್ನು ಮೇಲ್ದರ್ಜೆಗೇರಿಸುವುದು

219 (561) ಶ್ರೀ ಶಿವಶಂಕರ ರೆಡ್ಡಿ ಎನ್.ಹೆಚ್. (ಗೌರಿಬಿದನೂರು) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಗೌರಿಬಿದನೂರು ತಾಲ್ಲೂಕಿನ ಆಸ್ಪತ್ರೆಯ್ನು 100 ಹಾಸಿಗೆಯಾಗಿ ಮೇಲ್ದರ್ಜೆಗೇರಿಸಲು ಸರ್ಕಾರ ಪ್ರಸ್ತಾವನೆ ಸಲ್ಲಿಸಿರುವುದು ನಿಜವಲ್ಲವೇ;

ಆ) ಪ್ರತಿದಿನ 400–500 ಜನ ಒಳರೋಗಿಗಳು ಚಿಕಿತ್ಸೆಗೆ ದಾಖಲಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಇ) ಹಾಗಿದ್ದಲ್ಲಿ, ಸದರಿ ಆಸ್ಪತ್ರೆಯನ್ನು ಮೇಲ್ದರ್ಜೆಗೇರಿಸಿ ರೋಗಿಗಳ ಚಿಕಿತ್ಸೆಗೆ ಅನುಕೂಲ ಮಾಡಿಕೊಡಲು ಸರ್ಕಾರವು ಕೈಗೊಂಡಿರುವ ಕ್ರಮವೇನು?

ಶ್ರೀ ಬಿ. ಶ್ರೀರಾಮುಲು (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು):

ಅ) ಗೌರಿಬಿದನೂರು ತಾಲ್ಲೂಕು ಆಸ್ಪತ್ರೆಯನ್ನು ಈಗಾಗಲೇ ಮೇಲ್ದರ್ಜೆಗೇರಿಸಲಾಗಿದ್ದು, 2005ರಿಂದ ಅದು 100 ಹಾಸಿಗೆಗಳ ಸಾಮರ್ಥ್ಯದಲ್ಲಿ ಕಾರ್ಯನಿರ್ವಹಿಸುತ್ತಿದೆ.

ಆ) ಇಲ್ಲ.

ಇ) ಈಗಾಗಲೇ ಸದರಿ ಆಸ್ಪತ್ರೆ 100 ಹಾಸಿಗೆಗಳ ಸಾಮರ್ಥ್ಯದಲ್ಲಿ ಕಾರ್ಯ ನಿರ್ವಹಿಸುತ್ತಿದೆ.

ವಿದ್ಯುತ್ ಸಮಸ್ಯೆ

220 (562) ಶ್ರೀ ಶಿವಶಂಕರ ರೆಡ್ಡಿ ಎನ್.ಹೆಚ್. (ಗೌರಿಬಿದನೂರು) ಮಾನ್ಯ ಇಂಧನ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಬಾಗೇಪಲ್ಲಿ–ಗುಡಿಬಂಡೆ ತಾಲ್ಲೂಕುಗಳಲ್ಲಿ ವಿದ್ಯುತ್ ಅಭಾವದಿಂದ ವಿದ್ಯಾರ್ಥಿಗಳಿಗೆ, ರೈತರಿಗೆ, ಕುಡಿಯುವ ನೀರಿಗೆ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಗಡೀ ಪ್ರದೇಶವಾದ ಈ ಭಾಗದಲ್ಲಿ ಶಾಶ್ವತವಾಗಿ ವಿದ್ಯುತ್ ಸರಬರಾಜು ಮಾಡಲು ಸರ್ಕಾರ ಕೈಗೊಂಡ ಕ್ರಮಗಳೇನು;

ಇ) ಬಾಗೇಪಲ್ಲಿಯಲ್ಲಿ ಸೋಲಾರ್ ವಿದ್ಯುತ್ ನಿರ್ಮಿಸಲು ಉದ್ದೇಶಿಸಲಾಗಿದ್ದು, ಎಷ್ಟು ಮಂದಿ ಉದ್ದಿಮೆದಾರರಿಗೆ ಪರವಾನಗಿಯನ್ನು ಸರ್ಕಾರದಿಂದ ನೀಡಲಾಗಿದೆ; (ವಿವರ ಒದಗಿಸುವುದು)